ಪರ್ಯಾಲೋಚನಾ ಪ್ರಸ್ತಾವ

ಕರ್ನಾಟಕ ಸಹಕಾರ ಸಂಘಗಳ (ಎರಡನೇ ತಿದ್ದುಪಡಿ) ವಿಧೇಯಕ, 1997

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಸಹಕಾರ ಸಂಘಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಅದನ್ನು ಅವರು ಜಾಯಿಂಟ್ ಸೆಲೆಕ್ಷನ್ ಕಮಿಟಿಗೆ ಕೊಡಿ ಅಥವಾ ಅದರ ಬಗ್ಗೆ ಏನು ಮಾಡಬೇಕೆಂದು ಕಾನೂನು ಮಂತ್ರಿಗಳ ಜೊತೆ ಚರ್ಚೆ ಮಾಡಿ ತೀರ್ಮಾನ ತೆಗೆದುಕೊಳ್ಳೋಣ.

ಶ್ರೀ ಅರಗ ಜ್ಞಾನೇಂದ್ರ : ಅಧ್ಯಕ್ಷರೆ, ಅದನ್ನು ಜಂಟಿ ಸದನ ಸಮಿತಿಗೆ ಕೊಡಬೇಡಿ. ಆ ಸಹಕಾರ ತಿದ್ದುಪಡಿ ವಿಧೇಯಕವನ್ನು ಈ ಅಧಿವೇಶನದಲ್ಲಿ ಪಾಸು ಮಾಡಬೇಕು. ಆ ತಿದ್ದುಪಡಿಯು ಬಹಳ ಅತ್ಯವಶ್ಯಕವಾಗಿ ಇದೆ.

ಅಧ್ಯಕ್ಷರು : ಮಾನ್ಯ ವಿರೋಧಪಕ್ಷದ ನಾಯಕರು ಅವಶ್ಯಕತೆ ಇದೆ ಎಂದು ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಕಾನೂನು ಮಂತ್ರಿಗಳು ಸದನದಲ್ಲಿಲ್ಲ. ಕಾನೂನುಮಂತ್ರಿಗಳು ಬಂದ ಮೇಲೆ, ಕಾನೂನು ಮಂತ್ರಿಗಳು, ಮುಖ್ಯಮಂತ್ರಿಗಳ ಜೊತೆ ಚರ್ಚೆ ಮಾಡಿಕೊಂಡು ಇದರ ಬಗ್ಗೆ ಅವರನ್ನು ಮತ್ತು ನಿಮ್ಮೆಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ತದನಂತರ ಇದರ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗುವುದು. ಈ ಕೆಲಸವನ್ನು ಈ ದಿನದ ಸಂಜೆಯೊಳಗಾಗಿ ಮಾಡೋಣ. ಈಗ ತಾವು ಈ ವಿಧೇಯಕವನ್ನು ಪಾಸು ಮಾಡಿಕೊಡಿ. ಈಗ ಸಹಕಾರ ಮಂತ್ರಿಗಳು ವಿಧೇಯಕವನ್ನು ಮೂವ್ ಮಾಡಿ ನಂತರ ಅದರ ಬಗ್ಗೆ ಎಕ್ಸ್‌ಪ್ಲೈನ್ ಮಾಡಬೇಕು.

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಮಂತ್ರಿಗಳು) : ಅಧ್ಯಕ್ಷರೆ, ಎರಡನೇ ತಿದ್ದುಪಡಿಯಲ್ಲಿ ಅಂಥದ್ದೇನೂ ಹೆಚ್ಚಿನ ವಿಚಾರವಿಲ್ಲ. ಇದರಲ್ಲಿ ನಾವು ಇಂಡಸ್ಟ್ರೀಯಲ್ ಡಿಸ್‌ಪ್ಯೂಟ್ ಆಕ್ಟ್ ಮತ್ತು ಸಿವಿಲ್ ಕೋರ್ಟ್, ಇವೆಲ್ಲವನ್ನೂ ಬಾರ್ ಮಾಡಬೇಕೆಂದಿದ್ದೇವೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ``1997ರ ಕರ್ನಾಟಕ ಸಹಕಾರ ಸಂಘಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 4ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 4 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 4ರವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

" ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "1997ರ ಕರ್ನಾಟಕ ಸಹಕಾರ ಸಂಘಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "1997ರ ಕರ್ನಾಟಕ ಸಹಕಾರ ಸಂಘಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ಹೆದ್ದಾರಿಗಳ (ತಿದ್ದುಪಡಿ) ವಿಧೇಯಕ, 1997

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಹೆದ್ದಾರಿಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು.

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ರಾಜ್ಯದಲ್ಲಿ ರಸ್ತೆ ಮತ್ತು ಸೇತುವೆಗಳನ್ನು ಮಾಡಿದಾಗ ಸರ್ಕಾರದವರು ಕಟ್ಟಿರುವಂತಹ ರಸ್ತೆ ಮತ್ತು ಸೇತುವೆಗಳಿಗೆ ಸುಂಕವನ್ನು ವಿಧಿಸುವಂತಹ ವ್ಯವಸ್ಥೆ ಇದೆ. ಇವತ್ತು ಖಾಸಗಿ ವ್ಯಕ್ತಿಗಳಿಂದ ರಸ್ತೆ ಮತ್ತು ಸೇತುವೆಗಳನ್ನು ಮಾಡಬೇಕೆಂಬ ಉದ್ದೇಶವನ್ನು ಹೊಂದಿರುವುದರಿಂದ ರಾಜ್ಯದಾದ್ಯಂತ ರಸ್ತೆ ಮತ್ತು